## 2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ

**ದಿಃ 10.06.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

ನಾನು ಈ ಅರ್ಜಿಯಲ್ಲಿ ಅರ್ಜಿದಾರನಾಗಿದ್ದೇನೆ.

ನನ್ನ ಮುಖ್ಯವಿಚಾರಣೆಯ ಪ್ರಮಾಣಪತ್ರವನ್ನು ಈ ದಿನ ನ್ಯಾಯಾಲಯದ ಮುಂದೆ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ.

ನಾನು ನನ್ನ ಅರ್ಜಿಗೆ ಸಂಬಂಧಿಸಿದಂತೆ ಎಫ್ ಐ ಆರ್ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.1 ಎಂದು, ಪಿರ್ಯಾದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.2 ಎಂದು, ಸ್ಥಳ ಪಂಚನಾಮೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.3 ಎಂದು, ಸ್ಥಳ ನಕಾಶೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.4 ಎಂದು, ವಾಹನ ಪರಿಶೀಲನಾ ಪಂಚನಾಮಾದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.5 ಎಂದು, ಐ ಎಂ ವಿ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.6 ಎಂದು, ಅಂತಿಮ ವರದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.7 ಎಂದು, ಗಾಯದ ಪ್ರಮಾಣಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.8 ಎಂದು ಗುರುತಿಸಲಾಯಿತು.

**(ಮುಂದುವರೆದ ಮುಖ್ಯ ವಿಚಾರಣೆಗೆ ಅರ್ಜಿದಾರರ ಪರ ವಕೀಲರು ಸಮಯಾವಕಾಶ ಕೋರಿದ್ದು ನೀಡಿ ಮುಂದೂಡಲಾಯಿತು.)**

(ನನ್ನ ಉಕ್ತಲೇಖದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

Sd/-

**2 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.**